## ದಿನಾಂಕ: 7.9.2016ರಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

ಸಭೆಯಲ್ಲಿ ಹಾಜರಿದ್ದವರು :

1. ಶ್ರೀ ಡಿ.ಎನ್. ನರಸಿಂಹರಾಜು, ರಾಜ್ಯ ಮುಖ್ಯ ಮಾಹಿತಿ ಆಯುಕ್ತರು
2. ಶ್ರೀ ಎಲ್. ಕೃಷ್ಣಮೂರ್ತಿ, ರಾಜ್ಯ ಮಾಹಿತಿ ಆಯುಕ್ತರು
3. ಶ್ರೀ ಶಂಕರ್ ಆರ್. ಪಾಟೀಲ್, ರಾಜ್ಯ ಮಾಹಿತಿ ಆಯುಕ್ತರು
4. ಶ್ರೀ ಎನ್.ಪಿ. ರಮೇಶ್, ರಾಜ್ಯ ಮಾಹಿತಿ ಆಯುಕ್ತರು
5. ಶ್ರೀ ಕೆ.ಎಂ. ಚಂದ್ರೇಗೌಡ, ರಾಜ್ಯ ಮಾಹಿತಿ ಆಯುಕ್ತರು
6. ಶ್ರೀ ಪಿ.ಜಿ. ವಿಜಯಕುಮಾರ್, ರಾಜ್ಯ ಮಾಹಿತಿ ಆಯುಕ್ತರು
7. ಡಾ। ಸುಚೇತನ ಸ್ವರೂಪ, ರಾಜ್ಯ ಮಾಹಿತಿ ಆಯುಕ್ತರು
8. ಡಾ। ಸುನಿಲ್ ಪಂವಾರ್, ಕಾರ್ಯದರ್ಶಿ
9. ಶ್ರೀಮತಿ ಶ್ರೀಲತಾ ಕೋಟೀಮಠ್, ಅಧೀನ ಕಾರ್ಯದರ್ಶಿ

ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಸಭೆಯಲ್ಲಿ ಹಾಜರಿದ್ದ ಎಲ್ಲಾ ರಾಜ್ಯ ಮಾಹಿತಿ ಆಯುಕ್ತರುಗಳನ್ನು ಹಾಗೂ ಕಾರ್ಯದರ್ಶಿಯವರನ್ನು ಸ್ವಾಗತಿಸಿದರು. ಆಯೋಗದಲ್ಲಿ ಈ ಹಿಂದೆ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸಿದ ಶ್ರೀ ಜಿ.ಸಿ. ವೃಷಭೇಂದ್ರಮೂರ್ತಿ ಇವರು ಆಯೋಗದಲ್ಲಿ ಸಲ್ಲಿಸಿದ ಸೇವೆಯನ್ನು ಎಲ್ಲಾ ಮಾಹಿತಿ ಆಯುಕ್ತರ ಸಹಮತಿಯೊಂದಿಗೆ ಶ್ಲಾಘಿಸಿದರು.

ಸಭೆಯಲ್ಲಿ ಈ ಕೆಳಕಂಡ ವಿಷಯವನ್ನು ಚರ್ಚಿಸಲಾಯಿತು.

1) **ಅನುಪಾಲನಾ ವರದಿ**

ದಿನಾಂಕ: 4–8–2016ರಂದು ಆಯೋಗದಲ್ಲಿ ನಡೆದ ಸಭೆಯ ಅನುಪಾಲನಾ ವರದಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಒಪ್ಪಿಸಿದರು.

2) **ರಾಜ್ಯ ಮಾಹಿತಿ ಆಯುಕ್ತರುಗಳ ಸೇವಾ ಷರತ್ತುಗಳು ಹಾಗೂ ನಿಬಂಧನೆಗಳ ಬಗ್ಗೆ**

ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ಎಲ್. ಕೃಷ್ಣಮೂರ್ತಿಯವರು ರಾಜ್ಯ ಮಾಹಿತಿ ಆಯುಕ್ತರುಗಳ ಸೇವಾ ಷರತ್ತುಗಳು ಹಾಗೂ ನಿಬಂಧನೆಗಳಿಗೆ ಸಂಬಂಧಿಸಿದಂತೆ ಅವರು ಟಿಪ್ಪಣಿಯೊಂದಿಗೆ ನೀಡಿರುವ ಕರಡು ಆದೇಶದ ಪ್ರತಿಯನ್ನು ಪರಿಶೀಲಿಸಿ ಮಾನ್ಯ ರಾಜ್ಯ ಮುಖ್ಯ ಮಾಹಿತಿ ಆಯುಕ್ತರವರ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸುವಂತೆ ಕೋರಿದರು. ಸಭೆಯಲ್ಲಿ ಹಾಜರಿದ್ದ ಎಲ್ಲಾ ಮಾಹಿತಿ ಆಯುಕ್ತರು ಸಹ ಇದರ ಮೇಲೆ ಕ್ರಮ ಕೈಗೊಂಡು ಸರ್ಕಾರಕ್ಕೆ ಕಳುಹಿಸಲು ಕೋರಿದರು. ಅದಕ್ಕೆ ಸ್ಪಂದಿಸಿದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಬೇರೆ ರಾಜ್ಯಗಳಲ್ಲಿ ಹೊರಡಿಸಿರುವ ಆದೇಶದೊಂದಿಗೆ ಈ ಕರಡು ಆದೇಶದ ಪ್ರತಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ಕಳುಹಿಸಲು ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಕ್ರಮ: ಕಾರ್ಯದರ್ಶಿ

(3) ಅಕ್ಟೋಬರ್ 2016ರಲ್ಲಿ ನವದೆಹಲಿಯಲ್ಲಿ ನಡೆಯುವ ಕೇಂದ್ರ ಮಾಹಿತಿ ಆಯೋಗದ ವಾರ್ಷಿಕ ಸಮ್ಮೇಳನದಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತರನ್ನೊಳಗೊಂಡಂತೆ ಎಲ್ಲಾ ರಾಜ್ಯ ಮಾಹಿತಿ ಆಯುಕ್ತರುಗಳು ಹಾಗೂ ಕಾರ್ಯದರ್ಶಿಯವರು ಸದರಿ ಸಮ್ಮೇಳನದಲ್ಲಿ ಭಾಗವಹಿಸಲು ತೀರ್ಮಾನಿಸಲಾಯಿತು.

ರಾಜ್ಯ ಮುಖ್ಯ ಮಾಹಿತಿ ಆಯುಕ್ತರು.